**CC No.1995/2022**
**CW-16 PW-1**

# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಕನಕಪುರ

## ಸಿಸಿ ನಂ.1995/2022

| ಚಾಸಾ | **16** | ಪ್ರಾಸಾ | **1** |
|---|---|---|---|
| ಹೆಸರು | | ಪ್ರಭುಸ್ವಾಮಿ | |
| ತಂದೆಯ ಹೆಸರು | | ಲೇಟ್ ವೀರಭದ್ರಪ್ಪ | |
| ವಯಸ್ಸು | | **63**ವರ್ಷಗಳು | |
| ಉದ್ಯೋಗ | | ನಿವೃತ್ತ ಎಎಸ್ಐ | |
| ವಿಳಾಸ | | ಚಾಮರಾಜನಗರ | |

ದಿನಾಂಕ**.26.03.2026**ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**.**

**<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ನಾನು ಜೂನ್ **2021** ರಿಂದ ಡಿಸೆಂಬರ್ **2022**ರ ವರೆಗೂ ಹಾರೋಹಳ್ಳಿ ಪೊಲೀಸ್ ಠಾಣೆಯಲ್ಲಿ ಎಎಸ್ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ**.**

ದಿನಾಂಕ**.23.03.2022**ರಂದು ಸಂಜೆ **7.00**ಕ್ಕೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ**-1** ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರಿನ ಆಧಾರದ ಮೇಲೆ ಠಾಣಾ

ಗುನ್ನ ನಂ.**110/2022**ರಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ನನ್ನ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯು ಗುರುತಿಸಿದ ದಾಖಲೆಯು ದೂರು ಆಗಿದ್ದು, ಅದನ್ನು ನಿಪಿ-**1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**1(**ಎ**)** ಎಂದು ಗುರುತಿಸಲಾಯಿತು.

ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯು ಗುರುತಿಸಿದ ದಾಖಲೆಯು ಪ್ರಥಮ ವರ್ತಮಾನ ವರದಿಯಾಗಿದ್ದು, ಅದನ್ನು ನಿಪಿ-**2** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**2(**ಎ**)** ಎಂದು ಗುರುತಿಸಲಾಯಿತು.

ದೂರು ಪಡೆದ ನಂತರ ದಿನಾಂಕ.**23.02.2022**ರಂದು ನಮ್ಮ ಠಾಣೆಯಲ್ಲಿದ್ದ ಅಪಘಾತಕ್ಕೆ ಸಂಬಂಧಪಟ್ಟ ವಾಹನಗಳನ್ನು ಚಾಸಾ-**3** ಮತ್ತು ಚಾಸಾ-**4** ರವರ ಸಮಕ್ಷಮ ಆ ದಿನ ರಾತ್ರಿ **8.00** ರಿಂದ **8.40**ರ ವರೆಗೂ ಅಮಾನತ್ತುಪಡಿಸಿಕೊಂಡು ಅದಕ್ಕೆ ಸಂಬಂದಿಸಿದಂತೆ ಒಂದು ಮಹಜರ್ ನ್ನು ತಯಾರಿಸಿ ಅದಕ್ಕೆ ಸಾಕ್ಷಿದಾರರ ಸಹಿಗಳನ್ನು ಪಡೆದಿರುತ್ತೇನೆ.

ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯು ಗುರುತಿಸಿದ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು,

ಅದನ್ನು ನಿಪಿ-3 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ನಿಪಿ-3ರಡಿಯಲ್ಲಿ ಅಮಾನತ್ತುಪಡಿಸಿಕೊಂಡ ವಾಹನಗಳನ್ನು ನಮ್ಮ ಠಾಣಾ ಮಾಲುಪಟ್ಟಿಯಲ್ಲಿ ಸೇರಿಸಿಕೊಂಡಿರುತ್ತೇನೆ. ನಿಪಿ-3ರಡಿಯಲ್ಲಿ ಅಮಾನತ್ತುಪಡಿಸಿಕೊಂಡ ವಾಹನಗಳನ್ನು ನಾನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ವಾಹನ ಇರುವ ಒಂದು ಪೋಟೋವನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-17 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-

ಚಾಸಾ-3 ಮತ್ತು ಚಾಸಾ-4 ರವರಿಗೆ ಪಂಚರಾಗುವಂತೆ ನಾನು ನೋಟಿಸ್ ನೀಡಿರುತ್ತೇನೆ. ಸದರಿ ನೋಟಿಸ್ಸಿನ ಪ್ರತಿಯನ್ನು ಈ ಪ್ರಕರಣದಲ್ಲಿ ಹಾಜರುಪಡಿಸಿರುತ್ತಾರೋ ಇಲ್ಲವೋ ನನಗೆ ಗೊತ್ತಿಲ್ಲ. ನಿಪಿ-3ನ್ನು ತಯಾರಿಸುವ ಕಾಲಕ್ಕೆ ಚಾಸಾ-3 ಮತ್ತು 4 ರವರು ಸ್ಥಳದಲ್ಲಿ ಹಾಜರು ಇರಲಿಲ್ಲ ಎಂದರೆ ಸರಿಯಲ್ಲ. ನಿಪಿ-3ನ್ನು ನಾನು ಈ ಪ್ರಕರಣಕೋಸ್ಕರ ಠಾಣೆಯಲ್ಲಿ ಸೃಷ್ಟಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

ಆ ದಿನ ಯಾವುದೇ ಅಪಘಾತ ನಡೆಯದೆ ಇದ್ದರು ಪಿರ್ಯಾದುದಾರರ ಕುಟುಂಬದವರಿಗೆ ಪರಿಹಾರದ ಹಣ ಸಿಗಲಿ ಎಂಬ ಕಾರಣಕ್ಕೆ ಚಾಸಾ-1 ರವರು ನೀಡಿದ

ಸುಳ್ಳು ದೂರಿನ ಆಧಾರದ ಮೇಲೆ ಆರೋಪಿಯ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲಿಸಿ ಅದಕ್ಕೆ ಅನುಗುಣವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ- ಇಲ್ಲ

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಢೀಕರಿಸುತ್ತೇನೆ.)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**